# ಹೊರಟ್ಟಿಯಿಂದ ಸಿಎಂ ಭೇಟಿ ಇಂದು

**ಬೆಂಗಳೂರು:** ವಿಧಾನ ಪರಿಷತ್ ಸ್ಥಾನವನ್ನು ಜೆಡಿಎಸ್‌ಗೆ ಬಿಟ್ಟುಕೊಡುವಂತೆ ಮನವಿ ಮಾಡಲು ಜೆಡಿಎಸ್ ಹಿರಿಯ ಸದಸ್ಯ ಹಾಗೂ ಸಭಾಪತಿ ಸ್ಥಾನದ ಆಕಾಂಕ್ಷಿ ಬಸವರಾಜ್ ಹೊರಟ್ಟಿ ಬುಧವಾರ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಭೇಟಿ ಮಾಡಲಿದ್ದಾರೆ. ಜೆಡಿಎಸ್‌ಗೆ ಸಭಾಪತಿ ಸ್ಥಾನ ಪಡೆಯಲು ಜೆಡಿಎಸ್ ವರಿಷ್ಠ ದೇವೇಗೌಡರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ತೀರ್ಮಾನ ತೆಗೆದುಕೊಂಡಿದ್ದರಿಂದ, ಸಿಎಂರನ್ನು ಭೇಟಿ ಮಾಡಿ ಮನವಿ ಮಾಡುವಂತೆ ದೇವೇಗೌಡರು ಹೊರಟ್ಟಿಗೆ ಸೂಚಿಸಿದ್ದಾರೆ ಎಂದು ತಿಳಿದು ಬಂದಿದೆ. ಅವರ ಸೂಚನೆ ಮೇರೆಗೆ ಬಸವರಾಜ್ ಹೊರಟ್ಟಿ ಸಭಾಪತಿ ಸ್ಥಾನದ ಕುರಿತು ಚರ್ಚಿಸಲು ಸಿಎಂ ಸಮಯ ಕೇಳಿದ್ದು, ಬುಧವಾರ ಬೆಳಗ್ಗೆ 8.30 ಕ್ಕೆ ಹೊರಟ್ಟಿ ಭೇಟಿಗೆ ಮುಖ್ಯಮಂತ್ರಿ ಯಡಿಯೂರಪ್ಪ ಸಮಯ ನೀಡಿದ್ದಾರೆ ಎಂದು ತಿಳಿದು ಬಂದಿದೆ. ಹೀಗಾಗಿ ಬಸವರಾಜ್ ಹೊರಟ್ಟಿ ಬುಧವಾರ ಬೆಳಗ್ಗೆ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಭೇಟಿ ಮಾಡಿ ಪಕ್ಷದ ಪರವಾಗಿ ಮನವಿ ಮಾಡಲಿದ್ದಾರೆ ಎಂದು ತಿಳಿದು ಬಂದಿದೆ.